(ಇಂದು ದಿನಾಂಕಃ 04-03-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

<u>ಮುಖ್ಯ ವಿಚಾರಣೆಃ ಶ್ರೀ ಎಸ್.ಎಸ್.ಎ ವಾದಿ ಪರ ವಕೀಲರಿಂದಃ</u>

**1.** ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಂತಹ ವಿಷಯಗಳು ಸರಿಯಾಗಿರುತ್ತವೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ.

- ಕಂದಾಯ ಪಾವತಿಯ ರಸೀದಿಗಳನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-1 ರಿಂದ 3 ಎಂದು ಗುರುತಿಸಲಾಯಿತು.
- ಮಾರಾಟ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-4 ಮತ್ತು ನಿ.ಪಿ 4 ರ ಅನುವಾದ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-4 ಎ ಎಂದು ಗುರುತಿಸಲಾಯಿತು.
- ದಿನಾಂಕ 23-02-2022 ರಂದು ನೀಡಿರುವ ಹಿಂಬರಹವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-5 ಎಂದು ಗುರುತಿಸಲಾಯಿತು.
- ಸರ್ವೆ ನಂ. 44 ರ ಜಮೀನಿನ ಪಹಣಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-6 ಮತ್ತು 7 ಎಂದು ಗುರುತಿಸಲಾಯಿತು.
- ಆದೇಶ ಪುಟದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-8 ಎಂದು ಗುರುತಿಸಲಾಯಿತು.
- ದಿನಾಂಕ 07-02-2022 ರಂದು ಆಗಿರುವ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-9 ಎಂದು ಗುರುತಿಸಲಾಯಿತು.

- ಫಾರಂ ನಂಬರ 21 ನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-10 ಎಂದು ಗುರುತಿಸಲಾಯಿತು.
- ಮ್ಯುಟೇಷನ ರಿಜಿಸ್ಟರ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-11 ಎಂದು ಗುರುತಿಸಲಾಯಿತು.
- ಫಾರಂ ನಂಬರ 18 ನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-12 ಮತ್ತು 13 ಎಂದು ಗುರುತಿಸಲಾಯಿತು.
- ದಿನಾಂಕ 05-02-2019 ರ ಕ್ರಯಪತ್ರ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-14 ಎಂದು ಗುರುತಿಸಲಾಯಿತು.
- ಮೋಘಾ ಗ್ರಾಮದ ನಕ್ಷೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-15 ಮತ್ತು 16 ಎಂದು ಗುರುತಿಸಲಾಯಿತು.
- ಆಕಾರ ಬಂದನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-17 ಎಂದು ಗುರುತಿಸಲಾಯಿತು.
- ಪಂಚನಾಮೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-18 ಎಂದು ಗುರುತಿಸಲಾಯಿತು.

ಅದರಂತೆ ನನ್ನ ದಾವೆಯಲ್ಲಿ ಕೊರಿರುವಂತೆ ದಾವೆಯನ್ನು ಡಿಕ್ರಿ ಮಾಡಲು ಕೋರಿಕೊಳ್ಳುತ್ತೇನೆ.

**ಪಾಟೀ ಸಾವಾಲಿಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ, ಚಿಂಚೋಳಿ.